ಈ) "ರಾಷ್ಟ್ರಕವಿ" ಎಂಬುದು ಒಂದು ಗೌರವ ಸೂಚಕ ಪುರಸ್ಕಾರವಾಗಿದೆ. ಸ್ವಾತಂತ್ರ ಪೂರ್ವದಿಂದಲೂ ರಾಷ್ಟ್ರ ಕವಿ ಪುರಸ್ಕಾರವನ್ನು ನೀಡುತ್ತಾ ಬಂದಿರುವ ಸಂಪ್ರದಾಯವನ್ನು ಮುಂದುವರೆಸಿಕೊಂಡು ಬರಲಾಗುತ್ತಿದೆ.

ಉ) ಇಲ್ಲ.

ಬೋಧಕೇತರ ಸಿಬ್ಬಂದಿಗಳ ನಿಯೋಜನೆ ರದ್ದುಪಡಿಸುವುದು

234(488); ಶ್ರೀ ಗುರುಪಾದಗೌಡ ಸಂಗನಗೌಡ ಪಾಟೀಲ (ರೋಣ)

ಅ) ರಾಜ್ಯದಲ್ಲಿ ಕಾಲೇಜು ಶಿಕ್ಷಣ ಇಲಾಖೆಯಲ್ಲಿ ನೇಮಕಾತಿ ಹೊಂದಿ ಪದವಿ ಪೂರ್ವ ಕಾಲೇಜುಗಳಿಗೆ ನಿಯೋಜನೆಗೊಂಡಿರುವ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಇವರು ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ;

ಆ) ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು;

ಇ) ಈ ಹಿಂದೆ ಕಾಲೇಜು ಶಿಕ್ಷಣ ಇಲಾಖೆಯಿಂದ ಪದವಿ ಪೂರ್ವ ಕಾಲೇಜುಗಳಿಗೆ ನಿಯೋಜನೆಗೊಂಡಿರುವ ಬೋಧಕೇತರ ಸಿಬ್ಬಂದಿಗಳು ಬಡ್ತಿ, ಪದೋನ್ನತಿ ಸೌಲಭ್ಯಗಳಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಈ ಬೋಧಕೇತರ ಸಿಬ್ಬಂದಿಗಳ ನಿಯೋಜನೆಯನ್ನು ರದ್ದುಪಡಿಸಿ, ಪುನಃ ಕಾಲೇಜು ಶಿಕ್ಷಣ ಇಲಾಖೆಗೆ ಅವರ ಸೇವೆಯನ್ನು ಹಿಂಪಡೆಯುವ ಬಗ್ಗೆ ಸರ್ಕಾರವು ಚಿಂತನೆ ನಡೆಸಿದೆಯೇ?

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಸಚಿವರು)

ಅ) ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಒಟ್ಟು – 360

2001ನೇ ಸಾಲಿನಿಂದ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಆ) ಒಟ್ಟು – 3458

ಇ) ಬಂದಿದೆ.

ಈ) ಇಲ್ಲ.

ಖಾಲಿ ಹುದ್ದೆಗಳ ಭರ್ತಿ

235(484); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ಖಾಲಿ ಇರುವ ಸಹಾಯಕ ಇಂಜಿನಿಯರ್ ಮತ್ತು ಕಿರಿಯ ಇಂಜಿನಿಯರ್ ಹುದ್ದೆಗಳ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಎಷ್ಟು ಹುದ್ದೆಗಳ ಭರ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಇದಕ್ಕೆ ನಿಗದಿಪಡಿಸಿರುವ ವಿದ್ಯಾರ್ಹತೆ ವಿವರಗಳೇನು;

ಆ) ಹುದ್ದೆಗಳ ನೇಮಕಾತಿಗಾಗಿ ವಿದ್ಯಾರ್ಹತೆಯನ್ನು ನಿಗದಿಪಡಿಸುವ ಸಂದರ್ಭದಲ್ಲಿ ಪದವಿಯ ಜೊತೆಗೆ ಕಂಪ್ಯೂಟರ್ ಕಾನ್ಸೆಪ್ಟ್ ಕೋರ್ಸ್‌ನ ಪ್ರಮಾಣ ಪತ್ರವನ್ನು ಕೇಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹೈದ್ರಾಬಾದ್ ಕರ್ನಾಟಕ ಪ್ರದೇಶದ ಸಿವಿಲ್ ಇಂಜಿನಿಯರಿಂಗ್ ಪದವೀಧರರು ಮೇಲ್ಕಂಡ ಕಂಪ್ಯೂಟರ್ ಕಾನ್ಸೆಪ್ಟ್ ಪ್ರಮಾಣ ಪತ್ರಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಕಂಪ್ಯೂಟರ್ ಅರ್ಹತೆಯನ್ನು ಪಿಯುಸಿ ಮತ್ತು ಇಂಜಿನಿಯರಿಂಗ್ ವಿದ್ಯಾಭ್ಯಾಸದ ಸಮಯದಲ್ಲಿ ಹೊಂದಿರುವುದರಿಂದ ಈ ಭಾಗದ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಈ ಹುದ್ದೆಯ ನೇಮಕಾತಿಗೆ ಅರ್ಜಿ ಸಲ್ಲಿಸಲು ಸರ್ಕಾರ ಅನುವು ಮಾಡಿಕೊಡುವುದೇ; ಇಲ್ಲದಿದ್ದಲ್ಲಿ ಕಾರಣಗಳೇನು?